ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಸುತ್ತೋಲೆ

ಕಾರ್ಯನಿರ್ವಾಹಕ ನಿರ್ದೇಶಕರ ಕಚೇರಿ,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು – 560 012

**ಡಿಪ್ಲೊಮ ಸಿಇಟಿ ಪ್ರವೇಶ ಪರೀಕ್ಷೆ –2018ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.**

**ವೇಳಾಪಟ್ಟಿ**

| ದಿನಾಂಕ | ದಿನ | ಸಮಯ | ಅಂಕಗಳು |
|---|---|---|---|
| 15–07–2018 | ಭಾನುವಾರ | ಬೆಳಿಗ್ಗೆ 10.00 ರಿಂದ ಮ. 1.00 | 180 |

## ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ. ಸಂ | ಬೆಲ್ ಸಂಖ್ಯೆ | ಬೆಳಗಿನ ಅವಧಿ | ವಿವರಗಳು |
|---|---|---|---|
| 01 | ಮೊದಲನೇ ಬೆಲ್ | ಬೆ.9.40 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದರೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ.<br>• ಓಎಂಆರ್ ಉತ್ತರ ಪತ್ರಿಕೆಯು ಅಭ್ಯರ್ಥಿಗೆ ನಿರ್ದಿಷ್ಟವಾಗಿರುತ್ತದೆ. ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ನಿರ್ದಿಷ್ಟ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ.<br>• ಪರೀಕ್ಷಾ ಕೊಠಡಿಯಲ್ಲಿ ಅಭ್ಯರ್ಥಿಗಳಿಗೆ ನೀಡಲಾಗುವ ಓಎಂಆರ್ ಉತ್ತರ ಪತ್ರಿಕೆಯಲ್ಲಿ ಅಭ್ಯರ್ಥಿಯ ಪ್ರವೇಶ ಪತ್ರದ (DCET No.) ಸಂಖ್ಯೆ, ವಿಷಯ ಮತ್ತು ಅಭ್ಯರ್ಥಿಯ ಹೆಸರನ್ನು ಮುದ್ರಿಸಲಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಕೊಠಡಿ ಮೇಲ್ವಿಚಾರಕರು ತಮಗೆ ನೀಡುವ ಉತ್ತರ ಪತ್ರಿಕೆಯಲ್ಲಿ ಮುದ್ರಿತವಾಗಿರುವ ಸಿಇಟಿ ಸಂಖ್ಯೆ, ಹೆಸರು ಹಾಗು ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಸಿಇಟಿ ಸಂಖ್ಯೆ, ಹೆಸರು ಒಂದೇ ಆಗಿರುವುದನ್ನು ಖಾತ್ರಿಪಡಿಸಿಕೊಳ್ಳಬೇಕು. |
| 02 | ಎರಡನೇ ಬೆಲ್ | ಬೆ.9.50 | • **ಬೆ.9.50ಕ್ಕೆ** ಕ್ಕೆ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು/ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ".** ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ನಂತರ ಕೊಠಡಿ ಮೇಲ್ವಿಚಾರಕರು **ಬೆ. 9.55 ಕ್ಕೆ** ಲಕೋಟೆಯನ್ನು ತೆರೆದು ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ / ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ ವರ್ಷನ್ ಕೋಡ್ ಅನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಬರೆಯುವುದರ ಜೊತೆಗೆ ಸಂಭಂಧಿಸಿದ ವೃತ್ತವನ್ನು ಸಂಪೂರ್ಣವಾಗಿ ತುಂಬಬೇಕು ನಂತರ ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿನ ನಿಗದಿತ ಜಾಗದಲ್ಲಿ ಸಹಿ ಮಾಡಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಬೆ.10.00 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರು ಪುಸ್ತಕವನ್ನು ತೆರೆದು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಈ ಬೆಲ್ ಅಂದರೆ **ಬೆ.10.00** ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ.11.00 | • ಇದು ಮೊದಲನೆಯ ಎಚ್ಚರಿಕೆ ಬೆಲ್ – **ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ** |
| 05 | ಐದನೇ ಬೆಲ್ | ಮ.12.00 | • ಇದು ಎರಡನೆಯ ಎಚ್ಚರಿಕೆ ಬೆಲ್ – **ಪರೀಕ್ಷೆ ಮುಗಿಯಲು ಮೂವತ್ತು ನಿಮಿಷಗಳು ಬಾಕಿ ಉಳಿದಿರುವುದಕ್ಕಾಗಿ** |
| 06 | ಆರನೇ ಬೆಲ್ | ಮ.12.55 | • ಇದು ಕೊನೆಯ ಎಚ್ಚರಿಕೆಯ ಬೆಲ್ ಕೊಠಡಿ ಮೇಲ್ವಿಚಾರಕರು **ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ** ಎಂದು ತಿಳಿಸುತ್ತಾರೆ. |
| 07 | ಏಳನೇ ಹಾಗೂ ಕೊನೆಯ ಬೆಲ್ | ಮ.1.00 | • ಪರೀಕ್ಷೆ ಮುಕ್ತಾಯ.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಎಡಗೈ ಹೆಬ್ಬರಳ ಗುರುತನ್ನು ಹಾಕಲು ಹೇಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>ಮುಖ್ಯವಾದುದು: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕೆಇಎ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯ ಜೊತೆಯಲ್ಲಿ ಹಿಂದಿರುಗಿಸಬೇಕು. |

**ಸಹಿ/– ಕಾರ್ಯನಿರ್ವಾಹಕ ನಿರ್ದೇಶಕರು**

ಸೂಚನೆ: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್ ಉಪಕರಣಗಳು, ಮ್ಯಾಥಮ್ಯಾಟಿಕಲ್ ಟೇಬಲ್ಸ್, ಸ್ಲೈಡ್ ರೂಲ್ಸ್, ಕ್ಯಾಲುಕುಲೇಟರ್, ಪೇಜರ್, ಮೊಬೈಲ್ ಫೋನ್, ಬ್ಲೂಟೂತ್, ವೈರ್‌ಲೆಸ್ ಸೆಟ್ಸ್ ಇತ್ಯಾದಿಗಳನ್ನು ತರುವುದನ್ನು ನಿಷೇದಿಸಲಾಗಿದೆ.